ದಿನಾಂಕಃ 19-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ,

1) ನಾನು ಆದಾಯ ತೆರಿಗೆ ಪಾವತಿ ಮಾಡುವುದಿಲ್ಲ. ನಾನು ಆರೋಪಿಯಿಂದ ಆರೋಪಿಗೆ ಸೇರಿದ ವಾಹನವನ್ನು ರೂ. 50,000/- ಮೌಲ್ಯಕ್ಕೆ ಖರೀದಿ ಮಾಡಿರುತ್ತೇನೆ. ಸದರಿ ವಾಹನವನ್ನು ನನ್ನ ಹೆಸರಿಗೆ ವರ್ಗಾವಣೆ ಮಾಡಿಕೊಂಡಿರುವುದಿಲ್ಲ. ನಾನು ಆರೋಪಿಯಿಂದ ವಾಹನವನ್ನು ಅಡಮಾನ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

2) ಆರೋಪಿ ಹಣವನ್ನು ನಗದು ರೂಪದಲ್ಲಿ ಪಾವತಿ ಮಾಡಿರುತ್ತೇನೆ. ನನ್ನ ಬಳಿ ರೂ. 4,50,000/- ಇತ್ತು ಎಂದು ತೋರಿಸಲು ದಾಖಲು ಹಾಜರುಪಡಿಸಿರುವುದಿಲ್ಲ. ಸದರಿ ದಾಖಲೆಯನ್ನು ಹಾಜರುಪಡಿಸಲು ತೊಂದರೆ ಇರುವುದಿಲ್ಲ. ನಾನು ದ್ವಿಚಕ್ರ ವಾಹನವನ್ನು ಅಡಮಾನ ಮಾಡಿಕೊಂಡು ರಿಹಾನ್ ಮತ್ತು ಕೀರ್ತಿ ರವರ ಸಾಲ ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ಹಣವನ್ನು ಸಾಲವಾಗಿ ನೀಡದೆ ಇದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ಚೆಕ್ಕಿನಲ್ಲಿ ಎಷ್ಟು ಕಡೆ ಸಹಿ ಮಾಡಿರುತ್ತಾರೆ ಎಂದರೆ ಈಗ ನನಗೆ ನೆನಪಿರುವುದಿಲ್ಲ ಎಂದು ನುಡಿಯುತ್ತಾರೆ. ಆರೋಪಿಗೆ ಸೇರಿದ ಚೆಕ್ಕನ್ನು ದುರುಪಯೋಗ ಪಡೆಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ತಿಳುವಳಿಕೆ ಪತ್ರ ಕಳುಹಿಸಿರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ